ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೬

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆಂಟನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)
**ಮಂಗಳವಾರ, ದಿನಾಂಕ: ೧೦ನೇ ಮಾರ್ಚ್, ೨೦೨೬**

---

**ಸಮೂಹ – II**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

## ಅವಳಿ ಜಿಲ್ಲೆಗಳಲ್ಲಿ ಪೂರಕ ಕೈಗಾರಿಕೆಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರವು ಕಾರ್ಯಕ್ರಮಗಳನ್ನು ರೂಪಿಸಿರುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೬ (೮೧೨) ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ಬಹಳ ಭಾಗ ಮುಳುಗಡೆಯಾಗಿ ಲಕ್ಷಾಂತರ ಜನರು

ಮನೆ–ಜಮೀನುಗಳನ್ನು ಕಳೆದುಕೊಂಡು, ತಾವು ಮಾಡುತ್ತಿದ್ದ ಉದ್ಯೋಗಗಳನ್ನು ಕೂಡಾ ಕಳೆದುಕೊಂಡು ನಿರಾಶ್ರಿತರಾಗಿದ್ದು, ಸದರಿ ನಿರಾಶ್ರಿತರಿಗೆ ಉದ್ಯೋಗ ನೀಡುವ ದಿಶೆಯಲ್ಲಿ ಸರ್ಕಾರ ಸಣ್ಣ–ದೊಡ್ಡ ಉದ್ಯಮಗಳನ್ನು ಕಾರ್ಖಾನೆಗಳನ್ನು ಸ್ಥಾಪಿಸುವ ಕಾರ್ಯಕ್ರಮಗಳನ್ನು ರೂಪಿಸಿದೆಯೇ ; ರೂಪಿಸಿದ್ದರೆ, ಅವುಗಳ ಬಗ್ಗೆ ಮಾಹಿತಿ ನೀಡುವುದು ;

(ಆ) ಅವಳಿ ಜಿಲ್ಲೆಗಳಲ್ಲಿ ಅಪಾರ ಪ್ರಮಾಣದ ಲೈಮ್ ಸ್ಟೋನ್, ಡೋಲೋಮೈಟ್ ಇತ್ಯಾದಿ ಖನಿಜಗಳ ನಿಕ್ಷೇಪವಿದ್ದು, ರಾಜ್ಯದಲ್ಲಿಯೇ ತೋಟಗಾರಿಕೆ ಉತ್ಪನ್ನ ಬೆಳೆಯುವಂತಹ ವಿಫುಲವಾದ ಪ್ರದೇಶವಿದ್ದು, ಅಲ್ಲದೇ ನೇಕಾರಿಕೆ ಅವಲಂಬಿತ ದೊಡ್ಡ ಸಂಖ್ಯೆಯ ಕುಟುಂಬಗಳಿದ್ದು, ಅವಳಿ ಜಿಲ್ಲೆಗಳಲ್ಲಿ ಪೂರಕ ಕೈಗಾರಿಕೆಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರವು ಹೂಡಿಕೆ ಆಕರ್ಷಿಸುವ ಕಾರ್ಯಕ್ರಮಗಳನ್ನು ರೂಪಿಸಿದೆಯೇ ; (ಮಾಹಿತಿ ನೀಡುವುದು)

(ಇ) ರೂಪಿಸಿದ್ದರೆ, ಯಾವ ಯಾವ ಕ್ಷೇತ್ರಗಳಲ್ಲಿ ಫಲ ದೊರೆಯಲಿದೆ ? (ಮಾಹಿತಿ ನೀಡುವುದು)

## ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಾಂಗ್ರೆಸ್ ಪಕ್ಷದ ಕಛೇರಿಗಳಿಗೆ ಅತ್ಯಲ್ಪ ದರದಲ್ಲಿ CA ಸೈಟ್‌ಗಳನ್ನು ಮಂಜೂರು ಮಾಡಿರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೭ (೭೪೧) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಕಛೇರಿಗಳ ನಿರ್ಮಾಣಕ್ಕಾಗಿ ಸುಮಾರು ೪೦ ಕೋಟಿ ರೂ. ಮೌಲ್ಯದ ಸರ್ಕಾರಿ ಜಾಗವನ್ನು ಕೇವಲ ೨ ಕೋಟಿ ರೂ.ಗಳ ರಿಯಾಯಿತಿ ದರದಲ್ಲಿ ಮಂಜೂರು ಮಾಡಿರುವುದು ನಿಜವೆ ;

(ಆ) ತುಮಕೂರು, ಚಾಮರಾಜನಗರ, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮಾರುಕಟ್ಟೆ ದರಕ್ಕಿಂತ ಕಡಿಮೆ ಬೆಲೆಗೆ ಜಾಗ ನೀಡಿರುವುದರಿಂದ ಸರ್ಕಾರಕ್ಕೆ ಆಗಿರುವ ನಷ್ಟವೆಷ್ಟು ;

(ಇ) ನಿಯಮಗಳ ಪ್ರಕಾರ ಕಂದಾಯ ಇಲಾಖೆಯ ತಕರಾರಿದ್ದರೂ ಸಹ ನಿವೇಶನಗಳನ್ನು ಮಂಜೂರು ಮಾಡಲಾಗಿರುವುದರ ಉದ್ದೇಶವನ್ನು ತಿಳಿಸುವುದು ;

(ಈ) ಈ ಮಂಜೂರಾತಿ ಪ್ರಕ್ರಿಯೆಯಲ್ಲಿ ಕಾನೂನು ಉಲ್ಲಂಘನೆಯಾಗಿರುವ ಬಗ್ಗೆ ಕೇಳಿಬಂದಿರುವ ದೂರಿನನ್ವಯ ಮಂಜೂರಾತಿಯನ್ನು ರದ್ದುಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಜ್ ಇಲಾಖೆಯಿಂದ
## ಯಾತ್ರಿಕರ ಆಯ್ಕೆ ಮತ್ತು ಸೌಲಭ್ಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) –**

೭೮ (೭೩೧) ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಿಂದ ಹಜ್ ಯಾತ್ರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಆಯ್ಕೆಯಾದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಹಿರಿಯ ನಾಗರಿಕರು ಮತ್ತು ಮಹಿಳೆಯರಿಗೆ ಯಾವ ರೀತಿಯ ವಿಶೇಷ ಪ್ರಾತಿನಿಧ್ಯ ನೀಡಲಾಗುತ್ತಿದೆ ;

(ಇ) ಯಾತ್ರಿಕರಿಗೆ ವೈದ್ಯಕೀಯ ಪರೀಕ್ಷೆ, ಲಸಿಕೆ ಮತ್ತು ತರಬೇತಿ ಶಿಬಿರಗಳ ವ್ಯವಸ್ಥೆ ಕಾರ್ಯದ ಬಗ್ಗೆ ಮಾಹಿತಿ ಒದಗಿಸುವುದು ;

(ಈ) ಹಜ್ ಹೌಸ್‌ಗಳ ನಿರ್ವಹಣೆ ಮತ್ತು ವಸತಿ ಸೌಲಭ್ಯಗಳ ಗುಣಮಟ್ಟ ಕುರಿತು ಸರ್ಕಾರದ ಕ್ರಮವೇನು ?

## ರಾಜ್ಯದಲ್ಲಿ ಆಗಿರುವ ಹೂಡಿಕೆ ಒಪ್ಪಂದಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) –**

೭೯ (೮೦೬) ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಆಗಿರುವ ಹೂಡಿಕೆ ಒಪ್ಪಂದಗಳು ಎಷ್ಟು ; ಯಾವ ಯಾವ ಜಿಲ್ಲೆಯಲ್ಲಿ ಹೂಡಿಕೆ ಒಪ್ಪಂದ ಆಗಿದೆ ; (ಜಿಲ್ಲಾವಾರು ಸಮಗ್ರ ವಿವರ ನೀಡುವುದು)

(ಆ) ದಿನಾಂಕ: ೦೧–೦೨–೨೦೨೬ರವರೆಗೆ ಸರ್ಕಾರ ಅನುಮತಿ ನೀಡಿರುವ ಪ್ರಸ್ತಾವನೆಗಳು ಯಾವುವು ; ಈ ಒಪ್ಪಂದಗಳಿಂದಾಗಿ ಸೃಷ್ಟಿಯಾಗಿರುವ ಮತ್ತು ಸೃಷ್ಟಿಯಾಗಲಿರುವ ಉದ್ಯೋಗಗಳು ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಕಂಪನಿಗಳಿಗೆ ಸರ್ಕಾರ ಎಲ್ಲಿ ಎಷ್ಟು ಎಕರೆ ಜಮೀನು ಮಂಜೂರು ಮಾಡಿದೆ ; ಪ್ರಸ್ತುತ ಯಾವ ಯಾವ ಉದ್ದಿಮೆಗಳು ತಮ್ಮ ಕಾರ್ಯ ಆರಂಭ ಮಾಡಿವೆ ; (ಕೈಗಾರಿಕೆವಾರು ವಿವರ ನೀಡುವುದು)

(ಈ) ಬೆಂಗಳೂರು ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಬಂಡವಾಳ ಹೂಡಿಕೆಗೆ/ಆಕರ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಂಡವಾಳ ಹೂಡಿಕೆಗೆ ಸರ್ಕಾರ ವಿಶೇಷ ಸೌಕರ್ಯ ಕಲ್ಪಿಸಿದೆಯೇ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) –**

೮೦ (೭೫೫) ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು (Small Scale Industries) ಸ್ಥಾಪಿಸಲು ಸರ್ಕಾರವು ವಿಶೇಷ ಪ್ರಯತ್ನಗಳನ್ನು ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ಸ್ಥಾಪಿಸಲಾದ ಹೊಸ ಘಟಕಗಳ ತಾಲ್ಲೂಕುವಾರು ವಿವರಗಳೇನು ;

(ಆ) ಜಿಲ್ಲೆಯಲ್ಲಿ ಮುಚ್ಚಿಹೋಗಿರುವ ಸಣ್ಣ ಕೈಗಾರಿಕಾ ಘಟಕಗಳ ಸಂಖ್ಯೆ ಎಷ್ಟು ಮತ್ತು ಅವುಗಳ ಪುನಶ್ಚೇತನಕ್ಕಾಗಿ ಹಾಗೂ ಸ್ಥಳೀಯ ಎಂಜಿನಿಯರಿಂಗ್ ಪದವೀಧರರಿಗೆ ಹೊಸ ನಾವೀನ್ಯತೆ (Innovation) ಆಧಾರಿತ ಉದ್ಯಮಗಳನ್ನು ಪ್ರಾರಂಭಿಸಲು ಸರ್ಕಾರವು ಹಮ್ಮಿಕೊಂಡಿರುವ ವಿಶೇಷ ಉತ್ತೇಜಕ ಕ್ರಮಗಳೇನು ?

## ಇಂದಿರಾ ಕ್ಯಾಂಟೀನ್‌ಗಳ ಸ್ಥಿತಿ ಅಯೋಮಯವಾಗಿರುವ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) –**

೮೧ (೭೭೮) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ನಿಗದಿಪಡಿಸಿರುವ ಮೆನುವಿನಂತೆ ಕಲಬುರಗಿ ನಗರದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳಲ್ಲಿ ಆಹಾರ ವಿತರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಇಂದಿರಾ ಕ್ಯಾಂಟೀನ್‌ಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ನಿಜವೇ ; ಹಾಗಿದ್ದಲ್ಲಿ, ಅದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಇಂದಿರಾ ಕ್ಯಾಂಟೀನ್‌ಗಳಲ್ಲಿ ಡಿಜಿಟಲ್ ಪೇಮೆಂಟ್ ವ್ಯವಸ್ಥೆ ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬಳ್ಳಾರಿ ವಿಮಾಣ ನಿಲ್ದಾಣ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮೨ (೭೭೧) ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿನ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ ; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಯಿತು ;

(ಆ) ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ;

(ಇ) ವಿಮಾನ ನಿಲ್ದಾಣ ಕಾಮಗಾರಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಅವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ಮತ್ತು ಉಳಿದಿರುವ ಕಾಮಗಾರಿ ಯಾವ ಹಂತದಲ್ಲಿವೆ ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ವಿಜಯಪುರ ಮಹಾನಗರದ ಸಂಚಾರ ದಟ್ಟಣೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) –**

೮೩ (೮೬೪) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮಹಾನಗರವು ಸಂಚಾರ ದಟ್ಟಣೆಯಿಂದ ತೊಂದರೆಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿಜಯಪುರ ಮಹಾನಗರದ ಸಂಚಾರ ದಟ್ಟಣೆಯನ್ನು ತಪ್ಪಿಸಲು ಸರ್ಕಾರ ಕೈಗೊಂಡ ಪರ್ಯಾಯ ಮಾರ್ಗಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿಜಯಪುರ ಮಹಾನಗರಕ್ಕೆ ಮೆಟ್ರೋ ರೈಲು ಯೋಜನೆ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವಿಜಯಪುರ ಮಹಾನಗರದ ಮುಂದಿನ ೨೫ ವರ್ಷಗಳ ಬೆಳವಣಿಗೆಯನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಹಾಗೂ ಸಂಚಾರದ ದಟ್ಟಣೆಯನ್ನು ತಪ್ಪಿಸಲು ಮಹಾನಗರದ ರೈಲು ನಿಲ್ದಾಣದಿಂದ ಅಕ್ಕಮಹಾದೇವಿ ವಿಶ್ವವಿದ್ಯಾಲಯ ಹಾಗೂ ಗಣೇಶ್ ನಗರದಿಂದ ಆಶ್ರಮದವರೆಗೂ ಮೆಟ್ರೋ ರೈಲು ಯೋಜನೆ ಪ್ರಾರಂಭಿಸಲು ಸರ್ಕಾರ ಯೋಜನೆಯನ್ನು ರೂಪಿಸಿದೆಯೇ ; ರೂಪಿಸಿದ್ದರೆ, ಯೋಜನೆ ಯಾವ ಹಂತದಲ್ಲಿ ಇದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಮಹಾನಗರ ಪಾಲಿಕೆಯ ನೀರಿನ ಸರಬರಾಜು ಕಾಮಗಾರಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) –**

೮೪ (೮೧೩) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರದ ಖರ್ಗೆ ಪೆಟ್ರೋಲ್ ಬಂಕ್, ರಾಮ ಮಂದಿರ ವೃತ್ತ, ಹುಮನಾಬಾದ ರಿಂಗ್ ರಸ್ತೆ ಹಾಗೂ ಆಳಂದ ಚೆಕ್ ಪೋಸ್ಟ್ ಈ ನಾಲ್ಕು ಕಡೆ ಮೇಲ್ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವಾಗ ಕಾಮಗಾರಿ ಪ್ರಾರಂಭಿಸಿ ಜನರಿಗೆ ಸಂಚಾರ ದಟ್ಟಣೆಯಿಂದ ಮುಕ್ತಿ ನೀಡಲಾಗುವುದು ;

(ಆ) ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ನಿರಂತರ ನೀರಿನ ಸರಬರಾಜು ಕಾಮಗಾರಿ ನಡೆಯುತ್ತಿದ್ದು ಎಲ್ ಅಂಡ್ ಟಿ ಕಂಪನಿ ಗುತ್ತಿಗೆ ಪಡೆದಿದ್ದು ಸದರಿ ಕಾಮಗಾರಿಯೂ ಬಹಳ ವರ್ಷಗಳಿಂದ ಪೂರ್ಣವಾಗದೆ ಉಳಿದಿರಲು ಕಾರಣವೇನು ಮತ್ತು ಈ ಕಾಮಗಾರಿಗೆ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನ ಎಷ್ಟು ; ಬಳಕೆಯಾದ ಅನುದಾನ ಎಷ್ಟು ; ಈ ಕಾಮಗಾರಿಯು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ; ಇನ್ನು ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ಮಾಹಿತಿ ದಾಖಲೆಯೊಂದಿಗೆ ನೀಡುವುದು)

(ಇ) ಕಲಬುರಗಿ ನಗರದಲ್ಲಿ ೧೯೯೨-೯೩ರಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಧರಿಯಾಪುರ ಕೋಟನೂರ ಬಡಾವಣೆ ಅಭಿವೃದ್ಧಿಪಡಿಸಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಆದರೆ ಸದರಿ ಬಡಾವಣೆಯಲ್ಲಿ ರಾಜೀವ್ ಗಾಂಧಿ ಪಾರ್ಕ್ ಅಭಿವೃದ್ಧಿಪಡಿಸಲು ಸುಮಾರು ವರ್ಷಗಳಿಂದ ಕಾಮಗಾರಿ ಕೈಗೆತ್ತಿಕೊಂಡಿದ್ದರೂ ಪೂರ್ಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳಾದ ಚರಂಡಿ, ಶೌಚಾಲಯ, ಬೀದಿ ದೀಪಗಳು ಮತ್ತು ರಸ್ತೆಗಳು ಅಭಿವೃದ್ಧಿ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸದರಿ ಪಾರ್ಕ್ ಅಭಿವೃದ್ಧಿ ಕಾಮಗಾರಿ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ; ಮತ್ತು ಸದರಿ ಪಾಕ್ ಅಭಿವೃದ್ಧಿಗಾಗಿ ಇಲ್ಲಿಯವರೆಗೆ ಖರ್ಚು ಮಾಡಲಾದ ಅನುದಾನ ನಿಷ್ಪ್ರಯೋಜಕವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಿಂಧನೂರು ತಾಲ್ಲೂಕಿನಲ್ಲಿ ‘ಜವಳಿ ಪಾರ್ಕ್’ ಅನ್ನು ನಿರ್ಮಿಸುವ/ಸ್ಥಾಪಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) –**

೮೫ (೮೪೨) ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ನಗರದಲ್ಲಿನ ಯುವಕ/ಯುವತಿಯರು ನಿರುದ್ಯೋಗ ಸಮಸ್ಯೆಯಿಂದಾಗಿ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಗೋವಾ, ಮಹಾರಾಷ್ಟ್ರ ಮುಂತಾದ ಸ್ಥಳಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಿಂಧನೂರು ತಾಲ್ಲೂಕಿನಲ್ಲಿ ‘ಜವಳಿ ಪಾರ್ಕ್’ ಅನ್ನು ಸ್ಥಾಪಿಸಿದಲ್ಲಿ ಹಲವಾರು ಯುವಕ/ಯುವತಿಯರಿಗೆ ಉದ್ಯೋಗಾವಕಾಶ ದೊರಕುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲಿ, ಸಿಂಧನೂರಿನಲ್ಲಿ ‘ಜವಳಿ ಪಾರ್ಕ್’ ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಈ) ಸಿಂಧನೂರು ತಾಲ್ಲೂಕಿನಲ್ಲಿ ಸಿ.ಎಸ್.ಎಫ್. ನ ಸುಮಾರು ೭೫೦೦ ಎಕರೆ ಭೂಮಿ ಲಭ್ಯವಿದ್ದು, ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಸರ್ಕಾರದಿಂದ ‘ಜವಳಿ ಪಾರ್ಕ್’ ಅನ್ನು ಸ್ಥಾಪಿಸಲಾಗುವುದು? (ಮಾಹಿತಿ ನೀಡುವುದು)

# ಬೆಳಗಾವಿ ನಗರದ ಬಸವನ ಕುಡಚಿಯ ದೇವರಾಜ ಅರಸ್ KHB ಬಡಾವಣೆಯ ಮಹಾಲಕ್ಷ್ಮೀ ನಗರದ ಮೂಲಭೂತ ಸೌಕರ್ಯ ಅಭಿವೃದ್ಧಿ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) –**

೮೬ (೮೩೫) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದ ಬಸವನ ಕುಡುಚಿಯ ದೇವರಾಜ ಅರಸ್ KHB ಬಡಾವಣೆಯ ಮಹಾಲಕ್ಷ್ಮೀ ನಗರ ಕಾಲೋನಿ ಬೆಳಗಾವಿ ಮಹಾನಗರ ಪಾಲಿಕೆಯ ಅಧೀನಕ್ಕೆ ಒಳಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಹಾಲಕ್ಷ್ಮೀ ನಗರ ಕಾಲೋನಿಯೂ ೨೦೨೦ ರಲ್ಲಿ ಬೆಳಗಾವಿ ಮಹಾನಗರ ಪಾಲಿಕೆಗೆ ವರ್ಗಾಯಿಸಿದರೂ ಕಾಲೋನಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸದಿರುವುದಕ್ಕೆ ಕಾರಣಗಳೇನು ;

(ಇ) ಈ ಕಾಲೋನಿಯಲ್ಲಿ ಸಂಪರ್ಕ ರಸ್ತೆ, UGD, ವಿದ್ಯುತ್ ಸಂಪರ್ಕ ಮುಂತಾದ ಮೂಲಭೂತ ಸೌಕರ್ಯಗಳಿಲ್ಲದಕ್ಕಾಗಿ ಬಡಾವಣೆಯ ನಿವಾಸಿಗಳು ಪ್ರತಿನಿತ್ಯ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕಾಲೋನಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ ಬಡಾವಣೆ ನಿವಾಸಿಗಳು ನೆಮ್ಮದಿಯಿಂದ ಬದುಕಲು ಇಲಾಖೆ ಮತ್ತು ಮಹಾನಗರ ಪಾಲಿಕೆ ಕ್ರಮಕೈಗೊಳ್ಳುವುದೇ ?

# ರಾಜ್ಯದಲ್ಲಿ ಹಲಸಿನ ಬೆಳೆ ಸಂರಕ್ಷಣೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೭ (೭೪೭) ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಾರ್ಷಿಕವಾಗಿ ಎಷ್ಟು ಪ್ರಮಾಣದ ಹಲಸಿನ ಹಣ್ಣು ಉತ್ಪಾದನೆಯಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸರಿಯಾದ ಮಾರುಕಟ್ಟೆ ಮತ್ತು ಶೇಖರಣಾ ವ್ಯವಸ್ಥೆ ಇಲ್ಲದೆ ಪ್ರತಿ ವರ್ಷ ಶೇ.೪೦ರಿಂದ ೫೦ರಷ್ಟು ಹಲಸಿನ ಹಣ್ಣು ವ್ಯರ್ಥವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾಫಿ, ಚಹಾ ಮತ್ತು ಸಾಂಬಾರ ಪದಾರ್ಥಗಳ ಅಭಿವೃದ್ಧಿಗೆ ಇರುವಂತೆ, ಹಲಸಿನ ಹಣ್ಣಿನ ಸಮಗ್ರ ಅಭಿವೃದ್ಧಿಗಾಗಿ ಪ್ರತ್ಯೇಕ 'ಹಲಸಿನ ಮಂಡಳಿ' ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಈ) ಹಣ್ಣುಗಳು ವ್ಯರ್ಥವಾಗದಂತೆ ತಡೆಯಲು ತಾಲ್ಲೂಕು ಮಟ್ಟದಲ್ಲಿ ಶೀತಲೀಕರಣ ಕೇಂದ್ರ ಅಥವಾ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಅನುದಾನ ಮೀಸಲಿಡಲಾಗಿದೆಯೇ ;

(ಉ) ಗ್ರಾಮೀಣ ಭಾಗದ ಜನರ ಆದಾಯ ದ್ವಿಗುಣಗೊಳಿಸಲು ಹಲಸಿನ ಹಣ್ಣನ್ನು ಮೌಲ್ಯವರ್ಧಿತ ಉತ್ಪನ್ನಗಳಾಗಿ ಪರಿವರ್ತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೌಶಿಕ ಗ್ರಾಮದ ಗ್ರಾಮಸ್ಥರಿಗೆ ಕುಡಿಯುವ ನೀರು ಕಲುಷಿತವಾಗಿರುವ ಬಗ್ಗೆ

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೮ (೯೯೨) ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಹಾಸನ ಜಿಲ್ಲೆಯ ಹಾಸನ ತಾಲ್ಲೂಕು ಕೌಶಿಕ ಗ್ರಾಮದ ಮನೆಗಳ ಬೋರ್‌ವೆಲ್‌ಗಳ ನೀರು ಸುತ್ತಮುತ್ತಲಿನ ಕಾರ್ಖಾನೆಗಳಾದ ವಿದ್ಯಾ ಹರ್ಬನ್, ವೈನ್ ಸೂಪರ್ ಪ್ರೈಡ್ ಮತ್ತು ಇಂಡಸ್ಟ್ರೀಸ್ ಮತ್ತು ಇತರೆ

ಲ್ಯಾಬೋರೇಟರಿಗಳಿಂದ ಯಾವುದೇ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳದೆ ರಾಸಾಯನಿಕ ತ್ಯಾಜ್ಯಗಳನ್ನು ಬಿಟ್ಟಿರುವುದರಿಂದ ಕೌಶಿಕ ಗ್ರಾಮದ ಕೊಳವೆ ಬಾವಿಗಳಿಗೆ ಸೇರಿ ಕುಡಿಯುವ ನೀರು ಕಲುಷಿತಗೊಂಡಿರುವ ಬಗ್ಗೆ ಗ್ರಾಮಸ್ಥರಿಂದ ದೂರು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ನೀಡಿರುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೯ (೮೨೭) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ತಾಲ್ಲೂಕು ನರಸಾಪುರ ಮತ್ತು ವೇಮಗಲ್ ಕೈಗಾರಿಕಾ ಪ್ರದೇಶಗಳಲ್ಲಿ ಎಷ್ಟು ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ ; ಅವು ಯಾವುವು ; (ಸ್ಥಾಪನೆಯಾದ ವರ್ಷವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ನರಸಾಪುರ ಮತ್ತು ವೇಮಗಲ್ ಕೈಗಾರಿಕಾ ಪ್ರದೇಶದ ಕೈಗಾರಿಕೆಗಳಲ್ಲಿ ಎಷ್ಟು ಜನ ಸ್ಥಳೀಯರಿಗೆ ಕೆಲಸ ನೀಡಲಾಗಿದೆ ; ಸ್ಥಳೀಯರಿಗೆ ಕೆಲಸ ನೀಡಲು ಆದೇಶವಿದ್ದರೂ ಸಹ ಕೆಲವು ಕೈಗಾರಿಕೆಗಳು ಸರ್ಕಾರದ ಆದೇಶವನ್ನು ಪಾಲನೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಆದೇಶವನ್ನು ಪಾಲನೆ ಮಾಡದ ಕೈಗಾರಿಕೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ವಿಸ್ಟ್ರೋನ್, ಟಾಟಾ ಎಲೆಕ್ಟ್ರಾನಿಕ್ಸ್ ಸ್ಥಾಪನೆಗೊಂಡು ಎಷ್ಟು ವರ್ಷಗಳಾಗಿವೆ ; ಇದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ಹಾಗೂ ಕೋಲಾರ ಜಿಲ್ಲೆಯ ಸ್ಥಳೀಯರೆಷ್ಟು ; ಹಾಗೂ ಕರ್ತವ್ಯ ನಿರ್ವಹಿಸುತ್ತಿರುವವರನ್ನು

ಖಾಯಂಗೊಳಿಸಲು ಇರುವ ಮಾನದಂಡವೇನು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಸದರಿ ಕೈಗಾರಿಕೆಗಳಲ್ಲಿ ಕಾರ್ಮಿಕರಿಂದ ೩ ವರ್ಷದ ಸೇವೆ ಪಡೆದು ಹಾಗೂ ಇನ್ನಿತರ ಕೈಗಾರಿಕೆಗಳಲ್ಲಿ ೧೧ ತಿಂಗಳ ಸೇವೆಯನ್ನು ಪಡೆದು ತದನಂತರ ಕರ್ತವ್ಯದಿಂದ ವಜಾಗೊಳಿಸುತ್ತಿರಲು ಕಾರಣವೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ತೆಂಗು ಬೆಳೆ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) –**

೯೦ (೮೨೯) ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೆಂಗಿನ ತೋಟಗಳನ್ನು ಪುನಶ್ಚೇತನಗೊಳಿಸಲು ವೈಜ್ಞಾನಿಕವಾಗಿ ಸಹಜ ಬೇಸಾಯ ಅಳವಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಬಹು ಬೆಳೆ ಪದ್ಧತಿ ಜಾರಿಗೆ ತಂದು ಸರ್ಕಾರದ ಬೊಕ್ಕಸಕ್ಕೆ ಹೆಚ್ಚುವರಿ ಹೊರೆ ಇಲ್ಲದೆ ತೋಟಗಾರಿಕೆಗೆ ಶಕ್ತಿ ತುಂಬುವ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಆ) ತೋಟಗಾರಿಕೆ ಸಹಜ ಕೃಷಿ ಸಂಬಂಧ ಚಿಕ್ಕನಾಯಕನಹಳ್ಳಿ ತಾಲ್ಲೂಕು ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಂಯೋಜನೆಂಯುನ್ನು ಅಳವಡಿಸಿಕೊಳ್ಳಲಾಗಿದೆ ; ಈ ಯೋಜನೆಯನ್ನು ರಾಜ್ಯ ವ್ಯಾಪ್ತಿ ತೋಟಗಾರಿಕೆಯಲ್ಲಿ ಅಳವಡಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ತೋಟಗಾರಿಕೆಯಲ್ಲಿ ಸಹಜ ಕೃಷಿ ಜಾರಿಗೆ ತಂದು ಕಾಯಕ ಮಾಡುತ್ತಿರುವ ರೈತರಿಗೆ ಸರ್ಕಾರ ಬೆಂಬಲವಾಗಿ ನೀಡುತ್ತಿರುವ ಯೋಜನೆಗಳು,

ಅನುದಾನಗಳು, ಸಹಾಯಧನಗಳು ಯಾವುವು ; ಇಲ್ಲದೇ ಇದ್ದಲ್ಲಿ, ಯಾವ ಯಾವ ಯೋಜನೆಗಳನ್ನು ಸರ್ಕಾರ ರೂಪಿಸಲಿದೆ ;

(ಈ) ರಾಜ್ಯದ ತೋಟಗಾರಿಕೆಯಲ್ಲಿ ಎಷ್ಟು ಹೆಕ್ಟೇರ್ ಪ್ರದೇಶವು ಸಹಜ ಕೃಷಿಗೆ ಒಳಪಟ್ಟಿರುತ್ತದೆ ; ಸಹಜ ಕೃಷಿಗೆ ಉತ್ತೇಜನ ನೀಡಲು ಸರ್ಕಾರ ಸಹಾಯಧನ ಮತ್ತು ಅನುದಾನಗಳನ್ನು ಹೆಚ್ಚಿಸುವ ಉದ್ದೇಶ ಹೊಂದಿರುತ್ತದೆಯೇ ;

(ಉ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ತೋಟಗಾರಿಕೆಯಲ್ಲಿ ಯಾವಾಗ ಸಹಜ ಕೃಷಿ ಯೋಜನೆಯನ್ನು ಅಧಿಕೃತವಾಗಿ ಅಳವಡಿಸಿಕೊಳ್ಳಲಾಗಿದೆ ; ಇದನ್ನು ರಾಜ್ಯ ವ್ಯಾಪ್ತಿ ಕಾರ್ಯಕ್ರಮ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪಂಚಾಯಿತಿಗಳಿಗೆ ಅನುದಾನ ನೀಡಲು ರಾಜ್ಯ ಸರ್ಕಾರ ಯಾವ ಯೋಜನೆಗಳನ್ನು ಜಾರಿ ಮಾಡುವ ಉದ್ದೇಶವನ್ನು ಹೊಂದಿರುತ್ತದೆ ; (ವಿವರಗಳನ್ನು ಒದಗಿಸುವುದು)

(ಊ) ಸಹಜ ಕೃಷಿಯಲ್ಲಿ ತೆಂಗು ಬೆಳೆ ಹೆಚ್ಚು ಇಳುವರಿ ನೀಡುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; ಬಂದಿದ್ದಲ್ಲಿ, ಇದನ್ನು ಪ್ರೋತ್ಸಾಹಿಸಲು ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ;

(ಋ) ತೆಂಗು ಬೆಳೆ ಒಂದು ವಾಣಿಜ್ಯ ಬೆಳೆಯಾಗಿದ್ದು ತೆಂಗು ಮತ್ತು ಕೊಬ್ಬರಿಯನ್ನು ರಫ್ತು ಮಾಡಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, /ಪಿ2